# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 04 (50) |
| ಸದಸ್ಯರ ಹೆಸರು | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 04-12-2023 |
| ಉತ್ತರಿಸಬೇಕಾದ ಸಚಿವರು | ಉನ್ನತ ಶಿಕ್ಷಣ ಸಚಿವರು |

| ಪ್ರಶ್ನೆ | | ಉತ್ತರ |
|---|---|---|
| ಅ) | ಹೈದ್ರಾಬಾದ್- ಕರ್ನಾಟಕ ಜಿಲ್ಲೆಗಳಲ್ಲಿ ಎಷ್ಟು ಪ್ರಥಮ ದರ್ಜೆ ಕಾಲೇಜುಗಳಿವೆ; ಇವುಗಳಲ್ಲಿ ಎಷ್ಟು ಉಪನ್ಯಾಸಕರ ಹುದ್ದೆಗಳು ಖಾಲಿ ಇವೆ; ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು; | ಹೈದ್ರಾಬಾದ್- ಕರ್ನಾಟಕ ಜಿಲ್ಲೆಗಳಲ್ಲಿ ಒಟ್ಟು 81 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿವೆ. ಇವುಗಳಲ್ಲಿ ಮಂಜೂರಾಗಿರುವ, ಕಾರ್ಯನಿರತ, ಖಾಲಿ ಇರುವ ಉಪನ್ಯಾಸಕರ ಹುದ್ದೆಗಳ ವಿವರಗಳು ಈ ಕೆಳಕಂಡಂತಿದೆ. |

| ಕ್ರ. ಸಂ | ಜಿಲ್ಲೆ | ಮಂಜೂರಾದ ಹುದ್ದೆ | ಭರ್ತಿ ಹುದ್ದೆ | ಖಾಲಿ ಹುದ್ದೆ |
|---|---|---|---|---|
| 1 | ಬಳ್ಳಾರಿ | 157 | 94 | 63 |
| 2 | ಬೀದರ್ | 173 | 121 | 52 |
| 3 | ಕಲ್ಬುರ್ಗಿ | 331 | 271 | 60 |
| 4 | ಕೊಪ್ಪಳ | 167 | 96 | 71 |
| 5 | ರಾಯಚೂರು | 198 | 110 | 88 |
| 6 | ವಿಜಯನಗರ | 95 | 72 | 23 |
| 7 | ಯಾದಗಿರಿ | 140 | 7 | 63 |
| | **ಒಟ್ಟು** | **1261** | **841** | **420** |

ಹೈದ್ರಾಬಾದ್-ಕರ್ನಾಟಕ ಜಿಲ್ಲೆಗಳೂ ಒಳಗೊಂಡಂತೆ ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ 1242 ಸಹಾಯಕ ಪ್ರಾಧ್ಯಾಪಕರ ಖಾಲಿ ಹುದ್ದೆಗಳನ್ನು ಕರ್ನಾಟಕ ಪರಿಕ್ಷಾ ಪ್ರಾಧಿಕಾರದ ಮೂಲಕ ಭರ್ತಿ ಮಾಡಲು ಕ್ರಮವಹಿಸಲಾಗಿದೆ. ಅದರಲ್ಲಿ 221 ಸಹಾಯಕ ಪ್ರಾಧ್ಯಾಪಕ ಹುದ್ದೆಗಳನ್ನು ಹೈದ್ರಾಬಾದ್-ಕರ್ನಾಟಕ ಸ್ಥಳೀಯ ವೃಂದಕ್ಕೆ ಮೀಸಲಿಡಲಾಗಿರುತ್ತದೆ.

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಆಯ್ಕೆಯಾದ ಅಭ್ಯರ್ಥಿಗಳ ಅಂತಿಮ ಆಯ್ಕೆಪಟ್ಟಿಯನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 92 ಡಿಸಿಇ 2023(ಇ), ದಿನಾಂಕ:03.11.2023 ರಲ್ಲಿ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿದೆ. ವಿವಿಧ ವಿಷಯಗಳಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಆಯ್ಕೆಯಾಗಿರುವ ಅಭ್ಯರ್ಥಿಗಳ ನೇಮಕಾತಿ ಅರ್ಹತೆಗೆ ಸಂಬಂಧಿಸಿದಂತೆ, ಅವರ ವಿದ್ಯಾರ್ಹತೆ, ಮೀಸಲಾತಿ ಇನ್ನಿತರ ಅಗತ್ಯ ದಾಖಲೆಗಳ ಬಗ್ಗೆ ಸಕ್ಷಮ ಪ್ರಾಧಿಕಾರಗಳಿಂದ ನೈಜತೆ ವರದಿಗಳನ್ನು ಪಡೆಯಲು ಕ್ರಮವಹಿಸಲಾಗುತ್ತಿದೆ. ಪರಿಶೀಲನಾ ಪ್ರಕ್ರಿಯೆ ಪೂರ್ಣಗೊಂಡ ನಂತರ ನಿಯಮಾನುಸಾರ ನೇಮಕಾತಿ ಆದೇಶ ನೀಡಿ, ಹುದ್ದೆಗಳ ಭರ್ತಿಗೆ ಕ್ರಮವಹಿಸಲಾಗುವುದು.

| ಪ್ರಶ್ನೆ | | ಉತ್ತರ |
|---|---|---|
| ಆ) | ಬಹು ಸಂಖ್ಯೆಯಲ್ಲಿ ಕಾಲೇಜುಗಳಿದ್ದರೂ ಅವುಗಳಿಗೆ ಸಮರ್ಪಕವಾದ ಕಟ್ಟಡಗಳಿವೆಯೇ; (ವಿವರ ನೀಡುವುದು) | ಕಲ್ಯಾಣ ಕರ್ನಾಟಕ ಭಾಗದಲ್ಲಿ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ 82 ಸರ್ಕಾರಿ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. ಈ ಪೈಕಿ 80 ಕಾಲೇಜುಗಳು ಮೂಲಭೂತ ಸೌಕರ್ಯಗಳನ್ನೊಳಗೊಂಡಂತೆ ಸುಸಜ್ಜಿತ ಸ್ವಂತ ಕಟ್ಟಡ ಹೊಂದಿರುತ್ತವೆ.<br>02 ಕಾಲೇಜುಗಳು ಸ್ವಂತ ಕಟ್ಟಡ ಹೊಂದಿರುವುದಿಲ್ಲ. ಅವುಗಳೆಂದರೆ; ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು, ಬೀದರ್ – ಇತ್ತೀಚೆಗೆ ನಿವೇಶನ ಮಂಜೂರಾಗಿದ್ದು, ಕೆ.ಕೆ.ಆರ್.ಡಿ.ಬಿ.ಯಿಂದ ಮಂಜೂರಾಗಿರುವ ಅನುದಾನದಲ್ಲಿ ಕಟ್ಟಡ ನಿರ್ಮಾಣ ಮಾಡಲು ಅನುಮೋದನೆ ನೀಡುವ ಬಗ್ಗೆ ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ.<br>ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು, ಬಳ್ಳಾರಿಯ - ನಿವೇಶನ ಲಭ್ಯವಿರುವುದಿಲ್ಲ. |
| ಇ) | ಕಟ್ಟಡಗಳಿದ್ದಲ್ಲಿ, ಅವುಗಳ ಸ್ವಚ್ಛತೆಗಾಗಿ 'ಡಿ' ವೃಂದದ | ಹೈದ್ರಾಬಾದ್-ಕರ್ನಾಟಕ ಜಿಲ್ಲೆಗಳಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಮಂಜೂರಾಗಿರುವ, ಕಾರ್ಯನಿರತ, ಖಾಲಿ ಇರುವ ಡಿ ವೃಂದದ ಹುದ್ದೆಗಳ ವಿವರಗಳು ಕೆಳಕಂಡಂತಿದೆ. |

ಸಿಬ್ಬಂದಿಗಳಿದ್ದಾರೆಯೇ; 'ಡಿ' ವೃಂದದ ಸಿಬ್ಬಂದಿ ಇಲ್ಲದಿದ್ದಲ್ಲಿ, ಇವರನ್ನು ನೇಮಕ ಮಾಡಿಕೊಳ್ಳಲು ಸರ್ಕಾರದ ಮುಂದಿರುವ ಯೋಜನೆಗಳೇನು?

| ಕ್ರ. ಸಂ | ಜಿಲ್ಲೆಗಳ ಹೆಸರು | ಮಂಜೂರಾದ ಹುದ್ದೆ | ಭರ್ತಿ ಹುದ್ದೆ | ಖಾಲಿ ಹುದ್ದೆ |
|---|---|---|---|---|
| 1 | ಬಳ್ಳಾರಿ | 50 | 10 | 40 |
| 2 | ಬೀದರ್ | 58 | 12 | 46 |
| 3 | ಕಲ್ಬುರ್ಗಿ | 108 | 25 | 83 |
| 4 | ಕೊಪ್ಪಳ | 68 | 7 | 61 |
| 5 | ರಾಯಚೂರು | 60 | 13 | 47 |
| 6 | ವಿಜಯನಗರ | 33 | 9 | 24 |
| 7 | ಯಾದಗಿರಿ | 42 | 7 | 35 |
| | **ಒಟ್ಟು** | **419** | **83** | **336** |

ಖಾಲಿ ಇರುವ ಗ್ರೂಪ್-ಡಿ ಹುದ್ದೆಗಳಿಗೆ ಹುದ್ದೆಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ಸೇವೆಯನ್ನು ಬಳಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದ್ದು, ಅದರಂತೆ ಸರ್ಕಾರವು ಈಗಾಗಲೇ ಅನುಮತಿ ನೀಡಿರುವ 347 ಗ್ರೂಪ್-ಡಿ ಹಾಗೂ 102 ಡಾಟಾ ಎಂಟ್ರಿ ಆಪರೇಟರ್ ಒಟ್ಟು 449 ಹುದ್ದೆಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ಸೇವೆಯನ್ನು ಪಡೆಯಲಾಗಿದೆ.

ಅದರಂತೆ, ಹೈದ್ರಾಬಾದ್-ಕರ್ನಾಟಕ ಜಿಲ್ಲೆಗಳಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಗ್ರೂಪ್-ಡಿ ಸಿಬ್ಬಂದಿಗಳ ವಿವರ ಕೆಳಗಿನಂತಿದೆ;

| ಕ್ರ.ಸಂ | ಜಿಲ್ಲೆಗಳ ಹೆಸರು | ಗ್ರೂಪ್-ಡಿ ಸಿಬ್ಬಂದಿಗಳ ಸಂಖ್ಯೆ |
|---|---|---|
| 1 | ಬಳ್ಳಾರಿ | 07 |
| 2 | ಬೀದರ್ | 04 |
| 3 | ಕಲ್ಬುರ್ಗಿ | 09 |
| 4 | ಕೊಪ್ಪಳ | 13 |
| 5 | ರಾಯಚೂರು | 07 |
| 6 | ವಿಜಯನಗರ | 02 |
| 7 | ಯಾದಗಿರಿ | 05 |
| | **ಒಟ್ಟು** | **47** |

ಮುಂದುವರೆದು, ಸರ್ಕಾರದ ಪತ್ರ ಸಂಖ್ಯೆ: ಇಡಿ 117 ಯುಇಸಿ 2020(ಇ), ದಿನಾಂಕ:10.11.2023 ರಲ್ಲಿ ಇಲಾಖೆಯ ಕಛೇರಿಗಳು ಮತ್ತು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಅವಶ್ಯವಿರುವ ಗ್ರೂಪ್-ಡಿ ದರ್ಜೆಯ 700 ಕಛೇರಿ ಸಹಾಯಕರು ಮತ್ತು 300 ಶೈಕ್ಷಣಿಕ ಸಹಾಯಕರು (ಪ್ರಯೋಗಾಲಯಕ್ಕೆ) ಮತ್ತು ಸ್ವಚ್ಛತಾ ಕಾರ್ಯಕ್ಕೆ 152 ಒಟ್ಟು 1152 ಹುದ್ದೆಗಳಿಗೆ ಹೊರ/ಸೇವಾ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ. ಅದರಂತೆ, ಸದರಿ ಹುದ್ದೆಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ಸೇವೆಯನ್ನು ಪಡೆದು, ಅಗತ್ಯವಿರುವ ಕಾಲೇಜುಗಳಿಗೆ ಹಂಚಿಕೆ ಮಾಡಲು ಕ್ರಮವಹಿಸಲಾಗುತ್ತಿದೆ.

ಇಡಿ 291 ಡಿಸಿಇ 2023 (ಇ)

**(ಡಾ: ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು